18. 1967ರ ಕರ್ನಾಟಕ ಅಬಕಾರಿ (ಬಾಟ್ಲಿಂಗ್ ಆಫ್ ಲಿಕ್ಕರ್ಸ್) ನಿಯಮಗಳಲ್ಲಿ ಹೊಸದಾಗಿ ನಿಯಮ 15ಎ ಯನ್ನು ಸೇರ್ಪಡೆಗೊಳಿಸಿ ದಿನಾಂಕ 05–06–2003 ರಂದು ಹೊರಡಿಸಲಾದ ಎಫ್‌ಡಿ:9:ಪಿಇಎಸ್:2003(4)ನೇ ಸಂಖ್ಯೆಯ ಅಧಿಸೂಚನೆ;

19. 1968ರ ಕರ್ನಾಟಕ ಅಬಕಾರಿ (ಭಾರತೀಯ ಮತ್ತು ವಿದೇಶಿ ಮದ್ಯಗಳ ಮಾರಾಟ) ನಿಯಮಗಳ ನಿಯಮ 8ಕ್ಕೆ ತಿದ್ದುಪಡಿ ಮಾಡಿ ದಿನಾಂಕ 05–06–2003ರಂದು ಹೊರಡಿಸಲಾದ ಎಫ್‌ಡಿ:9:ಪಿಇಎಸ್:2003(5)ನೇ ಸಂಖ್ಯೆಯ ಅಧಿಸೂಚನೆ;

20. 1968ರ ಕರ್ನಾಟಕ ಅಬಕಾರಿ (ಭಾರತೀಯ ಮತ್ತು ವಿದೇಶಿ ಮದ್ಯಗಳ ಮಾರಾಟ) ನಿಯಮಗಳ ನಿಯಮ 8 ಮತ್ತು 9 'ಬಿ' ಗೆ ತಿದ್ದುಪಡಿ ಮಾಡಿ ದಿನಾಂಕ 22–04–2003 ರಂದು ಹೊರಡಿಸಲಾದ ಎಫ್‌ಡಿ:22:ಪಿಇಎಸ್:2002ನೇ ಸಂಖ್ಯೆಯ ಅಧಿಸೂಚನೆಗಳನ್ನು ಮಂಡಿಸುತ್ತಿದ್ದೇನೆ.

ಅಧ್ಯಕ್ಷರು : ಕಾಗದ ಪತ್ರಗಳನ್ನು ಮಂಡಿಸಲಾಗಿದೆ.

ವಿಷಯ:– ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ಆಧ್ಯಾದೇಶ 2003 (ಸಂಖ್ಯೆ 5) ಮಂಡನೆ

ಶ್ರೀ ಡಿ.ಬಿ. ಚಂದ್ರೇಗೌಡ : ಮಾನ್ಯ ಅಧ್ಯಕ್ಷರೇ, ಡಾ॥ ಪರಮೇಶ್ವರ್‌ದ್ದು.

ಅಧ್ಯಕ್ಷರು : ಅವರು ಎಲ್ಲಿದ್ದಾರೆ ಸ್ವಾಮಿ?

ಶ್ರೀ ಡಿ.ಬಿ ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) (ಮಾನ್ಯ ಉನ್ನತ ಶಿಕ್ಷಣ ಸಚಿವರ ಪರವಾಗಿ) : ಅವರು ಮೇಲ್ಮನೆಯಲ್ಲಿದ್ದಾರೆ. ಮಾನ್ಯ ಅಧ್ಯಕ್ಷರೇ, "ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ಆಧ್ಯಾದೇಶ, 2003 (ಸಂಖ್ಯೆ 5) ನ್ನು ಮಂಡಿಸುತ್ತಿದ್ದೇನೆ.

ಅಧ್ಯಕ್ಷರು : ಮಂಡಿಸಲ್ಪಟ್ಟಿತು.

4) ಚುನಾವಣಾ ಪ್ರಸ್ತಾವಗಳು

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) ಅವರು :–

ಅ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 265 (1)ನೇ ನಿಯಮದ ಅನುಸಾರವಾಗಿ ಈ ಸಭೆ **ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಗೆ ಹದಿನೈದು ಸದಸ್ಯರನ್ನು** ಚುನಾಯಿಸುವುದು.

ಆ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 268(1)ನೇ ನಿಯಮದ ಅನುಸಾರವಾಗಿ ಈ ಸಭೆ **ಅಂದಾಜುಗಳ ಸಮಿತಿಗೆ ಹದಿನೆಂಟು ಸದಸ್ಯರನ್ನು** ಚುನಾಯಿಸುವುದು.

ಇ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 271(1)ನೇ ನಿಯಮದ ಅನುಸಾರವಾಗಿ ಈ ಸಭೆ **ಸಾರ್ವಜನಿಕ ಉದ್ಯಮಗಳ ಸಮಿತಿಗೆ ಹದಿನೈದು ಸದಸ್ಯರನ್ನು** ಚುನಾಯಿಸುವುದು.

ಈ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 272(1)ನೇ ನಿಯಮದ ಅನುಸಾರವಾಗಿ ಈ ಸಭೆ **ಹಕ್ಕುಬಾಧ್ಯತಾ ಸಮಿತಿಗೆ ಒಂಬತ್ತು ಸದಸ್ಯರನ್ನು** ಚುನಾಯಿಸುವುದು.

ಉ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 277(1)ನೇ ನಿಯಮದ

ಅನುಸಾರವಾಗಿ ಈ ಸಭೆ ಅಧೀನ ಶಾಸನ ರಚನಾ ಸಮಿತಿಗೆ ಹದಿನೈದು ಸದಸ್ಯರನ್ನು ಚುನಾಯಿಸುವುದು.

ಊ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 281(1) ನೇ ನಿಯಮದ ಅನುಸಾರವಾಗಿ ಈ ಸಭೆ ಸರ್ಕಾರಿ ಭರವಸೆಗಳ ಸಮಿತಿಗೆ ಹದಿನೈದು ಸದಸ್ಯರನ್ನು ಚುನಾಯಿಸುವುದು.

ಋ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 283(1) ನೇ ನಿಯಮದ ಅನುಸಾರವಾಗಿ ಈ ಸಭೆ ಖಾಸಗಿ ಸದಸ್ಯರ ವಿಧೇಯಕಗಳ ಹಾಗೂ ನಿರ್ಣಯಗಳ ಸಮಿತಿಗೆ ಹತ್ತು ಸದಸ್ಯರನ್ನು ಚುನಾಯಿಸುವುದು.

ೠ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 286 ನೇ ನಿಯಮದ ಅನುಸಾರವಾಗಿ ಈ ಸಭೆ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಗೆ ಹದಿನೈದು ಸದಸ್ಯರನ್ನು ಚುನಾಯಿಸುವುದು.

ಎ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 288ನೇ ನಿಯಮದ ಅನುಸಾರವಾಗಿ ಈ ಸಭೆ ಹಿಂದುಳಿದ ವರ್ಗಗಳು ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಗೆ ಹದಿನೈದು ಸದಸ್ಯರನ್ನು ಚುನಾಯಿಸುವುದು.

ಏ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 370 (2) ನೇ ನಿಯಮದ ಅನುಸಾರವಾಗಿ ಈ ಸಭೆ ಸದನದ ಸಮಿತಿ (ವಸತಿ ಸೌಕರ್ಯಗಳ ಸಮಿತಿ) ಗೆ ಹನ್ನೆರಡು ಸದಸ್ಯರನ್ನು ಚುನಾಯಿಸುವುದು.

ಐ) 1994ನೇ ಇಸವಿಯ ಕರ್ನಾಟಕ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾನಿಲಯಗಳ ಅಧಿನಿಯಮದ ಕಲಂ 21(1) (vii) ಮೇರೆಗೆ ಏಕಲ ಸಂಕ್ರಮಣೀಯ ಮತದ ಮೂಲಕ ಅನುಪಾತ ಪ್ರಾತಿನಿಧ್ಯದ ನೀತಿಗೆ ಅನುಸಾರವಾಗಿ ಈ ಸಭೆಯು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾನಿಲಯದ ಸೆನೆಟ್‌ಗೆ ಮೂರು ಸದಸ್ಯರನ್ನು ಚುನಾಯಿಸುವುದು.

ಅಧ್ಯಕ್ಷರು : ಎಲ್ಲಾ ಪ್ರಸ್ತಾವಗಳನ್ನು ಮಂಡಿಸಲಾಗಿದೆ.

12.30 ಪಿಎಂ

5) ಅಧ್ಯಕ್ಷರ ಅಪ್ಪಣೆ ಮೇರೆಗೆ ಪ್ರಸ್ತಾಪಿಸಲಾದ ವಿಷಯಗಳು:–

ವಿಷಯ:– (ಅ) ಬೆಂಗಳೂರು ನಗರದಲ್ಲಿ ಕುಡಿಯುವ ನೀರಿನ ಕಳ್ಳತನ

+ಶ್ರೀ ಎಸ್. ಸುರೇಶ್ ಕುಮಾರ್ (ರಾಜಾಜಿನಗರ) : ಮಾನ್ಯ ಅಧ್ಯಕ್ಷರೆ, ಬೆಂಗಳೂರಿನ 60 ಲಕ್ಷ ಜನತೆಗೆ ಇವತ್ತು ಉಂಟಾಗಿರುವ ಆತಂಕದ ಬಗ್ಗೆ ಒಂದು ವಿಚಾರವನ್ನು ಶೂನ್ಯವೇಳೆಯಲ್ಲಿ ಪ್ರಸ್ತಾಪ ಮಾಡುವುದಕ್ಕೆ ತಮ್ಮ ಅನುಮತಿಯನ್ನು ಕೇಳುತ್ತಿದ್ದೇನೆ. ಕಳೆದ ತಿಂಗಳು 12ನೇ ತಾರೀಖಿನಿಂದ 24ನೇ ತಾರೀಖಿನವರೆಗೂ 10 ದಿವಸ ಬೆಂಗಳೂರಿನಲ್ಲಿ ಒಂದು ವಿಚಿತ್ರವಾದಂತಹ ಕಳುವು ಆಯಿತು. ಬೆಂಗಳೂರಿನ ಕುಡಿಯುವ ನೀರು ಕಳ್ಳತನ ಆಗಿ ಹೋಯಿತು. ಬೆಂಗಳೂರಿಗೆ ಏನು ಕುಡಿಯುವ ನೀರು ಬರಬೇಕಾಗಿತ್ತು, ಅದರ ಕಳ್ಳತನ ಆಗಿ ಹೋಯಿತು. ಬೆಂಗಳೂರಿಗೆ ಪ್ರತಿ ದಿವಸ ಸುಮಾರು 360 ಕ್ಯೂಸೆಕ್ಸ್ ನೀರು ಕಬಿನಿ ಜಲಾಶಯದಿಂದ ಬರುತ್ತಿತ್ತು. ಎರಡು ದಿವಸಕ್ಕೆ ಒಂದು ಸಲ ನೀರು ಕೊಡುತ್ತಿದ್ದಾರೆ. ಅದಕ್ಕೋಸ್ಕರ 360 ಕ್ಯೂಸೆಕ್ಸ್ ನೀರು ಕಬಿನಿ ಜಲಾಶಯದಿಂದ ಬರುತ್ತಿದೆ. ಕಳೆದ ತಿಂಗಳು ಜೂನ್ 12ನೇ ತಾರೀಖಿನಿಂದ ತೊರೆಕಾಡನಹಳ್ಳಿಯಲ್ಲಿ ನೀರಿನ ಸಂಗ್ರಹದ ಮಟ್ಟ ಕಡಿಮೆ